ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 159 (933)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಜೈನ್, ಬುದ್ಧ, ಸಿಖ್ ಸಮುದಾಯಗಳಿಗೆ ಯೋಜನೆಯ ಕುರಿತು

(ಅ) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಜೈನ್, ಬೌದ್ಧ, ಸಿಖ್, ಸಮುದಾಯಗಳಿಗೆ ಯಾವ ಯಾವ ಯೋಜನೆಯನ್ನು ರೂಪಿಸಲಾಗಿದೆ;

(ಆ) ಜೈನ್, ಬೌದ್ಧ, ಸಿಖ್, ಸಮುದಾಯಗಳ ಅಭಿವೃದ್ಧಿಗೆ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ; ಯಾವ ಯಾವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗಿದೆ;

(ಇ) ಜೈನ್, ಬೌದ್ಧ, ಸಿಖ್, ಸಮುದಾಯಗಳಿಗೆ ಕಳೆದ 5 ವರ್ಷಗಳಲ್ಲಿ ನಿರ್ಮಿಸಲಾದ ಸಮುದಾಯ ಭವನಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮುಸ್ಲಿಂ ಸಮುದಾಯದವರಿಗಾಗಿ ಕಳೆದ 5 ವರ್ಷಗಳಲ್ಲಿ ಎಷ್ಟು ಶಾದಿ ಮಹಲ್ ಮತ್ತು ಸಮುದಾಯ ಭವನಗಳನ್ನು ನಿರ್ಮಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)